# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 954(1284)
2. ಸದಸ್ಯರ ಹೆಸರು : ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 15.03.2021.
4. ಉತ್ತರಿಸಬೇಕಾದ ಸಚಿವರು : ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | 2018-19 ನೇ ಸಾಲಿನ ಬಜೆಟ್ ನಲ್ಲಿ ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯನ್ನು ಮೇಲ್ದರ್ಜೆಗೇರಿಸಲು 30 ಕೋಟಿ ಘೋಷಣೆಯಾಗಿ ಈ ಪೈಕಿ ಪ್ರಸ್ತುತ 10 ಕೋಟಿ ಬಿಡುಗಡೆಯಾಗಿದ್ದರೂ ಈ ಸಂಬಂಧ ಯಾವುದೇ ಕಾಮಗಾರಿ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>2018-19ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (MIMS) ಬೋಧಕ ಆಸ್ಪತ್ರೆಯನ್ನು 550 ರಿಂದ 800 ಹಾಸಿಗೆಯ ಸಾಮರ್ಥ್ಯಕ್ಕೆ ಮೇಲ್ದರ್ಜೆಗೇರಿಸುವ ಸಂಬಂಧ ರೂ.20.00 ಕೋಟಿಗಳ ವೆಚ್ಚದಲ್ಲಿ ಸಿವಿಲ್ ಕಾಮಗಾರಿಯನ್ನು ಕೈಗೊಳ್ಳಲು ಹಾಗೂ ರೂ.10.00 ಕೋಟಿಗಳ ವೆಚ್ಚದಲ್ಲಿ ಉಪಕರಣಗಳನ್ನು ಖರೀದಿಸಲು ಸರ್ಕಾರದ ಆದೇಶ ಸಂಖ್ಯೆ:ಆಕುಕ 318 ಎಂಪಿಎಸ್ 2019(1) ದಿನಾಂಕ:28.02.2019 ರಲ್ಲಿ ಅನುಮೋದನೆ ನೀಡಲಾಗಿದ್ದು, ಸಿವಿಲ್ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರದ ಆದೇಶ ಸಂಖ್ಯೆ:ಆಕುಕ 318 ಎಂಪಿಎಸ್ 2019(2) ದಿನಾಂಕ:28.02.2019 ರಂದು ರೂ.10.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.<br><br>ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೋಧಕ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಸಂಬಂಧ ಮಿಮ್ಸ್ , ಮಂಡ್ಯ ಸಂಸ್ಥೆಯ ವಿವಿಧ ವಿಭಾಗಗಳ ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರುಗಳ ತಂಡವು ಮೈಸೂರು ಮತ್ತು ಬೆಂಗಳೂರಿನಲ್ಲಿರುವ ಟ್ರಾಮಾಕೇರ್ ಸೆಂಟರ್‌ಗಳಿಗೆ ಭೇಟಿ ನೀಡಿ, ಅಲ್ಲಿಯ ಮೂಲಭೂತ ಸೌಕರ್ಯ ಮತ್ತು ವಿವಿಧ ಸೌಲಭ್ಯಗಳ ಬಗ್ಗೆ ಅಧ್ಯಯನ ನಡೆಸಿರುತ್ತಾರೆ.<br><br>ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಸೇರಿದ ಜಾಗವನ್ನು ಸ್ಲಂ ನಿವಾಸಿಗಳು ಅತಿಕ್ರಮಣ ಮಾಡಿದ್ದು, ಸದರಿ ನಿವಾಸಿಗಳಿಗೆ ಪರ್ಯಾಯ ವ್ಯವಸ್ಥೆ ಮಾಡಿ, ಅತಿಕ್ರಮಣಗೊಂಡಿರುವ ಜಾಗವನ್ನು ಮಿಮ್ಸ್ ಸಂಸ್ಥೆಗೆ ಹಸ್ತಾಂತರಿಸಬೇಕೆಂದು ಕೋರಿ ಶ್ರೀ ಜಿ.ಟಿ. ರವೀಂದ್ರಕುಮಾರ್ ಇವರು ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ |
| (ಆ) | ಬಂದಿದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು; | |
| (ಇ) | ಈ ಬಗ್ಗೆ ಸರ್ಕಾರದ ಮುಂದಿನ ಕ್ರಮವೇನು? | |

ಸಂಖ್ಯೆ:14537/2010ನ್ನು ದಾಖಲಿಸಿರುತ್ತಾರೆ.

ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ಕಾಲಮಿತಿಯನ್ನು ನಿಗದಿಪಡಿಸಿರುವುದರಿಂದ ಅತಿಕ್ರಮಣಗೊಂಡಿರುವ ಜಾಗವನ್ನು ತೆರವುಗೊಳಿಸಿ ಮಿಮ್ಸ್ ಸಂಸ್ಥೆಗೆ ಹಸ್ತಾಂತರಿಸಲು ಕಾನೂನು ರೀತ್ಯಾ ತುರ್ತು ಕ್ರಮವಹಿಸುವಂತೆ ಹಾಗೂ ಕೈಗೊಂಡ ಕ್ರಮದ ವರದಿಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ ಮತ್ತು ಆಯುಕ್ತರು, ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ ಹಾಗೂ ಕಾರ್ಯನಿರ್ವಾಹಕ ಅಭಿಯಂತರರು, ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ ಇವರಿಗೆ ಸರ್ಕಾರದಿಂದ ಸೂಚಿಸಲಾಗಿರುತ್ತದೆ.

ರಿಟ್ ಪಿಟಿಷನ್ ಸಂಖ್ಯೆ:14537/2010ರಲ್ಲಿ ಮಾನ್ಯ ನ್ಯಾಯಾಲಯವು ನೀಡಿದ ಆದೇಶವನ್ನು ಕಾಲಮಿತಿಯಲ್ಲಿ ಜಾರಿ ಮಾಡದೇ ಇರುವುದರ ವಿರುದ್ಧ ಶ್ರೀ ಜಿ.ಟಿ. ರವೀಂದ್ರಕುಮಾರ್ ಇವರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ನ್ಯಾಯಾಂಗ ನಿಂದನೆ ಪ್ರಕರಣ ಸಂಖ್ಯೆ: 1343/2018(ಸಿವಿಲ್) ನ್ನು ಸಹ ದಾಖಲಿಸಿರುತ್ತಾರೆ.

ಈಗಾಗಲೇ ಸ್ಲಂ ನಿವಾಸಿಗಳಿಗೆ ವಸತಿ ಸೌಕರ್ಯ ಕಲ್ಪಿಸಲು 06(ಆರು) ಎಕರೆ ಜಾಗದಲ್ಲಿ ಮನೆಗಳ ನಿರ್ಮಾಣ ಕಾಮಗಾರಿಯು ಶೇ. 80 ರಷ್ಟು ಮುಕ್ತಾಯಗೊಂಡಿದ್ದು, ಪೂರ್ಣ ಪ್ರಮಾಣದ ಮನೆಗಳನ್ನು 06 ತಿಂಗಳಲ್ಲಿ ನಿರ್ಮಿಸಿ ನಂತರ ಸ್ಲಂ ನಿವಾಸಿಗಳನ್ನು ತೆರವುಗೊಳಿಸಿ ಅತಿಕ್ರಮಣಕ್ಕೆ ಒಳಗಾಗಿರುವ ಸ್ಲಂ ಪ್ರದೇಶವನ್ನು ಮಿಮ್ಸ್, ಮಂಡ್ಯ ಸಂಸ್ಥೆಗೆ ಹಸ್ತಾಂತರಿಸಲಾಗುವುದೆಂದು ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ ಇವರು ತಿಳಿಸಿದ್ದು, ಈ ಸಂಬಂಧ ದಿನಾಂಕ:12.02.2021ರಂದು ಸಭೆ ನಡೆಸಿರುತ್ತಾರೆ. ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿಯು ಮಾನ್ಯ ಉಚ್ಚ ನ್ಯಾಯಾಲಯದ ಮುಂದೆ ರಿಟ್ ಅರ್ಜಿ ಸಂಖ್ಯೆ:14537/2010ರ ಪ್ರಕರಣದಲ್ಲಿ ಮಧ್ಯಂತರ ಅರ್ಜಿಯನ್ನು ಸಲ್ಲಿಸಿ ಸ್ಲಂ ನಿವಾಸಿಗಳ ಪುನರ್ವಸತಿಗಾಗಿ ಬೇರೆಡೆ ನಿರ್ಮಿಸಲಾಗುತ್ತಿರುವ ವಸತಿಗಳು ಇನ್ನೂ ಪೂರ್ಣಗೊಂಡಿಲ್ಲದ ಕಾರಣದಿಂದ ಹಾಗೂ ಮೂಲಭೂತ ಸೌಕರ್ಯವನ್ನು ಕಲ್ಪಿಸಲು ಅಗತ್ಯವಿರುವ ಅನುದಾನವು ಬಿಡುಗಡೆಗೊಂಡಿಲ್ಲದ ಕಾರಣ, ಸದರಿ ಅನುದಾನವು ಬಿಡುಗಡೆಗೊಂಡ ನಂತರ 18 ತಿಂಗಳುಗಳಲ್ಲಿ ವಸತಿಗೃಹಗಳನ್ನು ನಿರ್ಮಾಣ ಮಾಡುವುದಾಗಿ ತಿಳಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಅತಿಕ್ರಮಣಗೊಂಡ ಜಾಗವು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ವರ್ಗಾವಣೆಗೊಂಡ ನಂತರ ಮಿಮ್ಸ್ ಬೋಧಕ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವ ಸಿವಿಲ್ ಕಾಮಗಾರಿಯನ್ನು ಆರೋಗ್ಯ ಮತ್ತು ಕುಟುಂಬ

| | | |
|---|---|---|
| | | ಕಲ್ಯಾಣ ಇಲಾಖೆ, ಇಂಜಿನಿಯರಿಂಗ್ ವಿಭಾಗದ ವತಿಯಿಂದ ಕೈಗೊಳ್ಳಲು ಕ್ರಮವಹಿಸಲಾಗುವುದು ಹಾಗೂ ಪೀಠೋಪಕರಣ / ಉಪಕರಣಗಳ ಖರೀದಿಗೆ ಟೆಂಡರ್ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು. |

**ಸಂಖ್ಯೆ:** ಎಂಇಡಿ 183 ಎಂಪಿಎಸ್ 2021

(ಡಾ: ಕೆ. ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು